STD

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 686 |
| ಸದಸ್ಯರ ಹೆಸರು | : | ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 21/02/2023 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿನ ದಿನಗಳಲ್ಲಿ ಕಲ್ಯಾಣ ಕರ್ನಾಟಕದಲ್ಲಿ ಪೌಷ್ಠಿಕ ಆಹಾರದ ಕೊರತೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇತರೆ ಜಿಲ್ಲೆಗಳಿಗೆ ಹೋಲಿಸಿದಲ್ಲಿ, ಕಲ್ಯಾಣ ಕರ್ನಾಟಕದಲ್ಲಿ ಹೆಚ್ಚಿನ ಸಂಖ್ಯೆಯ ಅಪೌಷ್ಠಿಕ ಮಕ್ಕಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಅಂಕಿ-ಅಂಶಗಳ ಪ್ರಕಾರ ಕಲ್ಯಾಣ ಕರ್ನಾಟಕದಲ್ಲಿ ಅಪೌಷ್ಠಿಕತೆ ಕಾರಣದಿಂದ ಶಿಶುಗಳ ಮತ್ತು ತಾಯಂದಿರ ಮರಣ ಸಂಖ್ಯೆ ಹೆಚ್ಚುತ್ತಿರುವುದಕ್ಕೆ ಸರ್ಕಾರದ ವತಿಯಿಂದ ಕೈಗೊಳ್ಳಲಾದ ಕ್ರಮಗಳೇನು; | ಅಪೌಷ್ಠಿಕತೆಯನ್ನು ತಡೆಗಟ್ಟಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ.<br><br>**<u>ಪೂರಕ ಪೌಷ್ಠಿಕ ಆಹಾರ :</u>**<br><br>ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ. |
| ಇ) | ಹಲವಾರು ಸಂಶೋಧನಾ ಅಧ್ಯಯನಗಳಿಂದ ಕಲ್ಯಾಣ ಕರ್ನಾಟಕದ ಜನರು ಬಡತನದ ಕಾರಣದಿಂದ ಅಪೌಷ್ಠಿಕತೆ ಹೆಚ್ಚಿನ ಪ್ರಮಾಣದಲ್ಲಿದೆ ಎಂದು ಕಂಡು ಬಂದಿದ್ದು, ಇದನ್ನು ಹೋಗಲಾಡಿಸಲು ಸರ್ಕಾರದ ವತಿಯಿಂದ ಅಲ್ಪಾವಧಿ ಮತ್ತು ದೀರ್ಘಾವಧಿ ಕ್ರಮಗಳನ್ನು ಕೈಗೊಳ್ಳಲಾಗಿದೆಯೇ; | • ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿದಿನ ರೂ.8.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ.<br>• ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲೀ. ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 10 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.<br>• 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್. ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br>• 3 ವರ್ಷದಿಂದ 6 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪೌಷ್ಠಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.<br>• ಆರೋಗ್ಯ ಮತ್ತು ಪೌಷ್ಠಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಠಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಠಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತಿದೆ. |

| | | |
|---|---|---|
| | | **ಜುಚ್ಚುಮದ್ದು ಕಾರ್ಯಕ್ರಮ :**<br>6 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಿಗದಿತ ಚುಚ್ಚುಮದ್ದನ್ನು ನೀಡಲಾಗುತ್ತಿದೆ.<br><br>**ಆರೋಗ್ಯ ತಪಾಸಣೆ:**<br>ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ 3 ತಿಂಗಳಿಗೊಮ್ಮೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.<br><br>**ಮಾಹಿತಿ ಸೇವೆ :**<br>ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ಮಾಡಿದಾಗ ಹೆಚ್ಚಿನ ತಪಾಸಣೆಗೆ ಅಥವಾ ಚಿಕಿತ್ಸೆಗೆ ತಾಲ್ಲೂಕು ಆರೋಗ್ಯ ಕೇಂದ್ರ / ಜಿಲ್ಲಾ ಆರೋಗ್ಯ ಕೇಂದ್ರಕ್ಕೆ / ಪೌಷ್ಟಿಕ ಪುನರ್ವಸತಿ ಕೇಂದ್ರಗಳಿಗೆ ಕಳುಹಿಸಲು ಸೂಚಿಸುತ್ತಾರೆ. ವೈದ್ಯರು ಸೂಚಿಸಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹೆಚ್ಚಿನ ಚಿಕಿತ್ಸೆ, ತಪಾಸಣೆಗೆ ಮಕ್ಕಳನ್ನು ಕಳುಹಿಸಿಕೊಡುತ್ತಾರೆ.<br><br>**ಮಾತೃಪೂರ್ಣ ಯೋಜನೆ:**<br>• ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಟಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡುವ "ಮಾತೃಪೂರ್ಣ" ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.<br>• ಈ ಪೂರ್ಣ ಊಟದಲ್ಲಿ ಅನ್ನ, ಸಾಂಬಾರ್, ಪಲ್ಯದ ಜೊತೆಗೆ ಬೇಯಿಸಿದ ಮೊಟ್ಟೆ, 200 ಮಿ.ಲೀ. ಹಾಲು ಮತ್ತು ಚಿಕ್ಕಿಯನ್ನು ತಿಂಗಳಿಗೆ 25 ದಿನಗಳು ನೀಡಲಾಗುತ್ತಿದೆ.<br>• 2022ನೇ ವರ್ಷದಲ್ಲಿ ಮಳೆಗಾಲ ಮುಗಿಯುವವರೆಗೂ ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಕೊಡಗು, ಚಿಕ್ಕಮಗಳೂರು, ಹಾಸನ ಮತ್ತು ಶಿವಮೊಗ್ಗ ಜಿಲ್ಲೆಗಳ ಗುಡ್ಡಗಾಡು ಪ್ರದೇಶಗಳಲ್ಲಿನ ಮಾತೃಪೂರ್ಣ ಯೋಜನೆಯಡಿಯ ಫಲಾನುಭವಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಅವರ ಮನವಿಯ ಮೇರೆಗೆ ಕಚ್ಚಾ ಆಹಾರ ಪದಾರ್ಥಗಳನ್ನು (Take Home Ration) ಮನೆಗೆ ತೆಗೆದುಕೊಂಡು ಹೋಗಲು ಅವಕಾಶ ನೀಡಲಾಗಿದೆ.<br><br>**ಪ್ರಧಾನಮಂತ್ರಿ ಮಾತೃವಂದನಾ ಯೋಜನೆ (ಪಿ.ಎಂ.ಎಂ.ವಿ.ವೈ)**<br>"ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ" ಯಡಿ ಪರಿಷ್ಕೃತ ಮಾರ್ಗಸೂಚಿಯಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ನೋಂದಣಿ ಮಾಡಿಸಿದ ಗರ್ಭಿಣಿ / ಬಾಣಂತಿ ಮಹಿಳೆಯರಿಗೆ ರೂ.5,000/- ಗಳ ಹೆರಿಗೆ ಭತ್ಯೆಯನ್ನು ಎರಡು ಕಂತುಗಳಲ್ಲಿ ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ವರ್ಗಾಯಿಸಲಾಗುವುದು. 2ನೇ ಮಗು ಹೆಣ್ಣು ಮಗುವಾಗಿದ್ದಲ್ಲಿ ಒಂದೇ ಕಂತಿನಲ್ಲಿ ರೂ.6,000/- ಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. |

| | | |
|---|---|---|
| ಈ. | ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆ ಮತ್ತು ಲೋಪಗಳನ್ನು ಸರಿಪಡಿಸಲು ಸರ್ಕಾರವು ಯಾವ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಿದೆ ? | ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಈ ಕೆಳಕಂಡಂತೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ.<br><br>1. ಅಂಗನವಾಡಿ ಕೇಂದ್ರಗಳಿಗೆ ಆಹಾರ ಪೂರೈಕೆ ಮೇಲ್ವಿಚಾರಣೆ ಮಾಡಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ.<br>2. ಗುಣಮಟ್ಟದ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುತ್ತಿರುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೆ ಒಳಪಡಿಸಿ ವರದಿಯನ್ನು ಪಡೆಯಲಾಗುತ್ತಿದೆ.<br>3. ಅಂಗನವಾಡಿ ಕೇಂದ್ರಗಳಿಗೆ ಸರಿಯಾದ ಪ್ರಮಾಣದಲ್ಲಿ ಮತ್ತು ಗುಣಮಟ್ಟದ ಆಹಾರ ಪದಾರ್ಥಗಳನ್ನು ಸ್ವೀಕರಿಸಿದ ಬಗ್ಗೆ ಬಾಲವಿಕಾಸ ಸಮಿತಿಯ ಸದಸ್ಯರುಗಳಿಂದ ಮೇಲ್ವಿಚಾರಣೆ ಮಾಡಲಾಗುತ್ತಿದೆ.<br>4. ಗುಣಮಟ್ಟದ ಆಹಾರ ಪದಾರ್ಥಗಳನ್ನು ಸಮರ್ಪಕವಾಗಿ ಸರಬರಾಜು ಮಾಡದೇ ಇರುವ ಎಂ.ಎಸ್.ಪಿ.ಟಿ.ಸಿ. ಗಳ ಮೇಲೆಯೂ ಸಹ ಕ್ರಮ ಕೈಗೊಳ್ಳಲಾಗುತ್ತಿದೆ.<br>5. ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಿರುವ ಆಹಾರ ಪದಾರ್ಥಗಳನ್ನು ಕಾಳಸಂತೆಯಲ್ಲಿ ಮಾರಾಟವಾಗುವುದನ್ನು ತಪ್ಪಿಸಲು ಅಂಗನವಾಡಿ ಕೇಂದ್ರಗಳಿಗೆ ಆಹಾರ ಸರಬರಾಜು ಮಾಡುವ Route Map (ಮಾರ್ಗನಕ್ಷೆ) ಬಗ್ಗೆ ಸೂಚನೆಗಳನ್ನು ನೀಡಲಾಗಿದೆ. ಸಾಗಾಣಿಕೆ ವಾಹನದಲ್ಲಿ Route Map (ಮಾರ್ಗನಕ್ಷೆ) ಅನ್ನು ಪ್ರದರ್ಶಿಸಲು ಮತ್ತು ಬಾಲವಿಕಾಸ ಸಮಿತಿ ಸದಸ್ಯರುಗಳಿಗೆ ಸಲ್ಲಿಸಲು ಸೂಚಿಸಲಾಗಿದೆ.<br><br>6. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಜಿಲ್ಲಾ ನಿರೂಪಣಾಧಿಕಾರಿಗಳು ಮತ್ತು ಉಪ ನಿರ್ದೇಶಕರುಗಳು ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮದ ಸಮರ್ಪಕ ಅನುಷ್ಠಾನಕ್ಕಾಗಿ ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಸೂಚನೆ ನೀಡಲಾಗಿದೆ. |

**ಸಂಖ್ಯೆ:ಮಮಇ 33 ಐಸಿಡಿ 2023**

Halappa Basa

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.